# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| | | |
|---|---|---|
| **ಭಾಗ – ೪ ಎ**<br>**Part – IVA** | ಬೆಂಗಳೂರು, ಶುಕ್ರವಾರ, ೧೭, ಫೆಬ್ರವರಿ, ೨೦೨೩ (**ಮಾಘ**, ೨೮, ಶಕವರ್ಷ, ೧೯೪೪)<br>**BENGALURU, FRIDAY, 17, FEBRUARY, 2023 (MAGHA, 28, SHAKAVARSHA, 1944)** | ನಂ. ೭೧<br>**No. 71** |


## ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 136 ಸೇವನೆ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ: 17.02.2023

## ಅಧಿಸೂಚನೆ

ಕರ್ನಾಟಕ ನಾಗರಿಕ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು, 2012, ಇದನ್ನು ಮತ್ತಷ್ಟು ತಿದ್ದುಪಡಿ ಮಾಡುವುದಕ್ಕೆ ದಿನಾಂಕ: 25.01.2023ರ ಅಧಿಸೂಚನೆ ಸಂಖ್ಯೆ: ಸಿಆಸುಇ 136 ಸೇವನೆ 2022 ರಲ್ಲಿ ಪ್ರಕಟಿಸಿರುವ ಈ ಮುಂದಿನ ನಿಯಮಗಳ ಕರಡನ್ನು ಅಧಿಕೃತ ರಾಜ್ಯಪತ್ರದಲ್ಲಿ ಪ್ರಕಟಿಸಿದ ದಿನಾಂಕದಿಂದ 15 ದಿನಗಳೊಳಗಾಗಿ ಅದರಿಂದ ಬಾಧಿತರಾಗುವ ಸಂಭವವಿರುವ ಎಲ್ಲಾ ವ್ಯಕ್ತಿಗಳಿಂದ ಆಕ್ಷೇಪಣೆಗಳನ್ನು ಮತ್ತು ಸಲಹೆಗಳನ್ನು ಆಹ್ವಾನಿಸಿ ದಿನಾಂಕ: 25.01.2023ರ ಕರ್ನಾಟಕ ರಾಜ್ಯಪತ್ರದ ಭಾಗ IV-ಎ ರಲ್ಲಿ ಕರ್ನಾಟಕ ರಾಜ್ಯ ನಾಗರಿಕ ಸೇವೆಗಳ ಅಧಿನಿಯಮ, 1978 (1990 ರ ಕರ್ನಾಟಕ ಅಧಿನಿಯಮ 14)ರ 3ನೇ ಪ್ರಕರಣದ (2)ನೇ ಉಪ ಪ್ರಕರಣದ (ಎ) ಖಂಡವನ್ನು ಪ್ರಕರಣ 8ರೊಂದಿಗೆ ಓದಿಕೊಂಡು ಅಗತ್ಯಪಡಿಸಲಾದಂತೆ ಪ್ರಕಟಿಸಲಾಗಿರುವುದರಿಂದ;

ಸದರಿ ರಾಜ್ಯಪತ್ರವನ್ನು ದಿನಾಂಕ: 25.01.2023ರಂದು ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಿರುವುದರಿಂದ;

ಮತ್ತು, ಸದರಿ ಕರಡಿನ ಬಗ್ಗೆ ಸ್ವೀಕೃತವಾಗಿರುವ ಆಕ್ಷೇಪಣೆ ಮತ್ತು ಸಲಹೆಗಳನ್ನು ರಾಜ್ಯ ಸರ್ಕಾರವು ಪರಿಶೀಲಿಸಿರುವುದರಿಂದ;

ಈಗ, ಕರ್ನಾಟಕ ರಾಜ್ಯ ನಾಗರಿಕ ಸೇವೆಗಳ ಅಧಿನಿಯಮ, 1978 (1990 ರ ಕರ್ನಾಟಕ ಅಧಿನಿಯಮ 14) ರ 3ನೇ ಪ್ರಕರಣದ (1) ನೇ ಉಪ ಪ್ರಕರಣವನ್ನು 8ನೇ ಪ್ರಕರಣದೊಂದಿಗೆ ಓದಿಕೊಂಡಂತೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಕೆಳಕಂಡ ನಿಯಮಗಳನ್ನು ರಚಿಸುತ್ತದೆ, ಎಂದರೆ:-

## ನಿಯಮಗಳು

**1. ಶೀರ್ಷಿಕೆ ಮತ್ತು ಪ್ರಾರಂಭ:-** (1) ಈ ನಿಯಮಗಳನ್ನು ಕರ್ನಾಟಕ ನಾಗರಿಕ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) (ತಿದ್ದುಪಡಿ) ನಿಯಮಗಳು, 2023 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು ಅಧಿಕೃತ ರಾಜ್ಯಪತ್ರದಲ್ಲಿ ಅಂತಿಮವಾಗಿ ಪ್ರಕಟಗೊಂಡ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**2. ನಿಯಮ 2ಕ್ಕೆ ತಿದ್ದುಪಡಿ:-** ಕರ್ನಾಟಕ ನಾಗರಿಕ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು 2012ರ (ಇದರಲ್ಲಿ ಇನ್ನು ಮುಂದೆ ಸದರಿ ನಿಯಮಗಳೆಂದು ಉಲ್ಲೇಖಿಸಲಾಗಿದೆ) ನಿಯಮ 2ರಲ್ಲಿ "ದಿನಾಂಕ: 31.12.2022 ರೊಳಗೆ" ಎಂಬ ಪದ ಮತ್ತು ಅಂಕಿಗಳ ಬದಲಿಗೆ "ದಿನಾಂಕ: 31.12.2023 ರೊಳಗೆ" ಎಂಬ ಪದ ಮತ್ತು ಅಂಕಿಗಳನ್ನು ಪ್ರತಿಸ್ಥಾಪಿಸತಕ್ಕದ್ದು.

**3. ನಿಯಮ 3ಕ್ಕೆ ತಿದ್ದುಪಡಿ :-** ಸದರಿ ನಿಯಮಗಳ ನಿಯಮ 3ರಲ್ಲಿ,-

(ಎ) ಉಪ ನಿಯಮ (1)ರಲ್ಲಿ "ದಿನಾಂಕ: 31.12.2022ರೊಳಗೆ" ಎಂಬ ಪದ ಮತ್ತು ಅಂಕಿಗಳ ಬದಲಿಗೆ "ದಿನಾಂಕ: 31.12.2023ರೊಳಗೆ" ಎಂಬ ಪದ ಮತ್ತು ಅಂಕಿಗಳನ್ನು ಪ್ರತಿಸ್ಥಾಪಿಸತಕ್ಕದ್ದು.

(ಬಿ) ಉಪ ನಿಯಮ (2)ರಲ್ಲಿ "ದಿನಾಂಕ: 31.12.2022ರೊಳಗೆ" ಎಂಬ ಪದ ಮತ್ತು ಅಂಕಿಗಳ ಬದಲಿಗೆ "ದಿನಾಂಕ: 31.12.2023ರೊಳಗೆ" ಎಂಬ ಪದ ಮತ್ತು ಅಂಕಿಗಳನ್ನು ಪ್ರತಿಸ್ಥಾಪಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವೀರಭದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1).

## GOVERNMENT OF KARNATAKA

No. DPAR 136 SCR 2022

Karnataka Government Secretariat,
Vidhana Soudha,
Bengaluru, dated: 17.02.2023

## NOTIFICATION

Whereas the draft of the following rules further to amend the Karnataka Civil Services (Computer Literacy Test) Rules, 2012, was published as required by clause (a) of sub-section (2) of Section 3 read with Section 8 of the Karnataka State Civil Services Act, 1978 (Karnataka Act 14 of 1990) in Notification No. DPAR 136 SCR 2022 dated: 25.01.2023 in Part IV-A of the Karnataka Gazette Extraordinary dated: 25.01.2023 inviting objections and suggestions from all persons likely to be affected thereby within fifteen days from the date of publication of the draft in the Official Gazette.

Whereas, the said Gazette was made available to the public on 25.01.2023.

And whereas, the objections and suggestions received have been considered by the State Government.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



Now, therefore, in the exercise of the powers conferred by sub-section (1) of Section 3 read with Section 8 of the Karnataka State Civil Services Act, 1978 (Karnataka Act 14 of 1990), the Government of Karnataka hereby makes the following rules, namely;

## RULES

**1. Title and Commencement:-** (1) These rules may be called the Karnataka Civil Services (Computer Literacy Test) (Amendment) Rules, 2023.

(2) They shall come into force from the date of their final publication in the Official Gazette.

**2. Amendment of rule 2:-** In the Karnataka Civil Services (Computer Literacy Test) Rules, 2012 (hereinafter referred to as the said rules), in rule 2, for the words and figures "within 31.12.2022" the words and figures "within 31.12.2023" shall be substituted.

**3. Amendment of rule 3.-** In rule 3 of the said rules,-

(a) in sub-rule (1), for the words and figures "within 31.12.2022" the words and figures "within 31.12.2023" shall be substituted.

(b) in sub-rule (2), for the words and figures " within 31.12.2022" the words and figures "within 31.12.2023" shall be substituted.

By Order and in the name of the
Governor of Karnataka,

( VEERABHADRA )
Under Secretary to Government
Department of Personnel and
Administrative Reforms
(Service Rules-1).

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

SUNIL GARDE